**ಎಂ ವಿ ಸಿ ನಂಃ 76-15**
**ಪಿ ಡಬ್ಲ್ಯೂ ಃ 1**

**ದಿಃ 18-06-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ**

9. ನಾನು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 15 ಎಂದು ಗುರುತಿಸಲಾಯಿತು. ನಾನು ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 16 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದ**

10. ನನ್ನ ಊರು ಹೊಸಪೇಟೆ ಆಗಿರುತ್ತದೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತೋರಿಸಿದ ವಿಳಾಸದಲ್ಲಿ ನಾನು ಇದ್ದೆ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿಲ್ಲ. ನಾನೇ ದ್ವಿಚಕ್ರ ವಾಹನವನ್ನು ತೆಗೆದುಕೊಂಡಿದ್ದೆ. ಸದರಿ ದ್ವಿಚಕ್ರ ವಾಹನಕ್ಕೆ ಸಂಬಂದಿಸಿದಂತೆ ನನ್ನ ಕಡೆ ಆರ್ ಸಿ, ಡಿ ಎಲ್ ಇದ್ದು ವಿಮೆ ಇರುತ್ತದೆ ಅವುಗಳನ್ನು ಹಾಜರುಪಡಿಸಬಹುದು. ನಾನು ದಿನಾಂಕಃ 14-09-2014 ರಂದು ಬೆಂಗಳೂರಿನಲ್ಲಿ ಕೆಲಸ ಮುಗಿಸಿಕೊಂಡು ಮನೆಗೆ ಹೋಗುತ್ತಿದ್ದೆ. ಅಪಘಾತ ರಾತ್ರಿ 8.30 ಯಿಂದ 9.30 ರೊಳಗೆ ಆಗಿರುತ್ತದೆ. ಆ ಸಮಯದಲ್ಲಿ ಹಿಂದುಗಡೆಯಿಂದ ಬರುತ್ತಿದ್ದ ವಾಹನಗಳು ನನಗೆ ಕಾಣಿಸುತ್ತಿತ್ತು. ನಾನೇ ಹೋಗಿ ಆಟೋಗೆ ಅಪಘಾತ ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಮೂತ್ರ ವಿಸರ್ಜನೆ ಮಾಡಲು ನನ್ನ ವಾಹನವನ್ನು ನಿಲ್ಲಿಸಿದೆ ವಾಪಸ್ಸು ವಾಹನವನ್ನು ಚಲಾಯಿಸುವ ಸಮಯದಲ್ಲಿ ಆಟೋದಿಂದ ಅಪಘಾತ ಆಗಿರುತ್ತದೆ ಎಂದು ಸಾಕ್ಷಿ ಮುಂದುವರೆದು ಹೇಳುತ್ತಾರೆ. ಈ ವಿಷಯವನ್ನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಮತ್ತು ದೂರಿನಲ್ಲಿ ನಮೂದು ಇಲ್ಲ ಎಂದರೆ ನಿಜ. ಅಪಘಾತ ಅದ ನಂತರ ನನ್ನನ್ನು ಮಾಗಡಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು ಅಲ್ಲಿಂದ ನಿಮಾನ್ಸ್ ಹೋಗಿರುತ್ತೇನೆ, ಅಲ್ಲಿಂದ ವಿಕ್ಟೋರಿಯಾ ಆಸ್ಪತ್ರೆಗೆ ಅಲ್ಲಿಂದ ಕಾಡೆ ಆಸ್ಪತ್ರೆಗೆ ಹೋಗಿರುತ್ತೇನೆ. ಮಾಗಡಿ ಸರ್ಕಾರಿ ಆಸ್ಪತ್ರೆಯಲ್ಲಿ ನಿಮಾನ್ಸ್ ನಲ್ಲಿ ಮತ್ತು ವಿಕ್ಟೋರಿಯಾ ಆಸ್ಪತ್ರೆಯಲ್ಲಿ ನನಗೆ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ. ಕಾಡೆ ಆಸ್ಪತ್ರೆಯಲ್ಲಿ ನನಗೆ ಚಿಕಿತ್ಸೆ ಕೊಟ್ಟ ವೈದ್ಯರ ಸಾಕ್ಷಿಯನ್ನು ಮಾಡಿಸಬಹುದು. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಹೇಳಿರುವ ಹಾಗೆ ನಾನು ವೈದ್ಯಕೀಯ ಚಿಕಿತ್ಸೆಗೆ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ 1 ನ್ನು ಹೊರತುಪಡಿಸಿ ನಾನು ಕೆಲಸ ಮಾಡುವ ಬಗ್ಗೆ ಮತ್ತು ವರಮಾನದ ಬಗ್ಗೆ ಬೇರೆ ದಾಖಲೆಗಳು ಇಲ್ಲ ಎಂದರೆ ನಿಜ. ನಿಪಿ 1 ನ್ನು ಕೊಟ್ಟವರನ್ನು ನಾನು ಸಾಕ್ಷಿ

ವಿಚಾರಣೆ ಮಾಡಿಸಬಹುದು. ನಿಪಿ 15 ನ್ನು ಕೊಟ್ಟವರ ಸಾಕ್ಷಿ ವಿಚಾರಣೆ ಮಾಡಿಸಬಹುದು. ನಾನು ಸೃಷ್ಟಿಸಿದ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತಕ್ಕೆ ಸಂಬಂದಿಸಿದಂತೆ ಮಾಗಡಿ ಪೋಲಿಸರು ಪೂರ್ತಿಯಾಗಿ ತನಿಖೆ ಮಾಡಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಾರೆ ಎಂದರೆ ನಿಜ. ಅಪಘಾತದಲ್ಲಿ ಭಾಗಿಯಾದ ಆಟೋಗೆ ವಿಮೆ ಇರಲಿಲ್ಲ ಎಂದು ದೋಷಾರೋಪಣಾ ಪಟ್ಟಿಯಲ್ಲಿ ನಮೂದು ಇದೆ ಎಂದರೆ ನಿಜ. ಆದ ಕಾರಣ ಪರಿಹಾರ ಕೊಡಲು ಎದುರುದಾರರು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ.
ಮರು ವಿಚಾರಣೆ ಇಲ್ಲ.

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಮಾಗಡಿ.**